## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2015-16ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳ ಬಾಕಿ ಪಾವತಿಗಾಗಿ ಬೀದರ್ ಜಿಲ್ಲೆಗೆ ರೂ.44.47 ಲಕ್ಷಗಳ ಕೇಂದ್ರ ಹಾಗೂ ರಾಜ್ಯ ಸಹಾಯಧನವನ್ನು ಅನುದಾನ ಲಭ್ಯತೆ ಇರುವ ಜಿಲ್ಲೆಗಳಿಂದ ವರ್ಗಾಯಿಸುವ ಕುರಿತು

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ರವರ ಪತ್ರ ಸಂಖ್ಯೆ :ಜಿಪಂಬೀ/ರಾಜೈಅಯೋ/ಸಿಆರ್/2016-17/ ದಿನಾಂಕ 24.04.2016

### ಪ್ರಸ್ತಾವನೆ :

ಮೇಲೆ ಓದಲಾದಂತೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್, ರವರು **2015-16**ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಸಹಾಯಧನ ಬಾಕಿ ಪಾವತಿಸಲು **ರೂ.44.47**ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುವುದನ್ನು ಪರಿಶೀಲಿಸಿದ್ದು, **2015-16**ನೇ ಸಾಲಿನಲ್ಲಿ ಕಾರ್ಯಕ್ರಮದಡಿ ಬಿಡುಗಡೆಯಾದ ಕೇಂದ್ರ ಹಾಗೂ ರಾಜ್ಯ ಸಹಾಯಧನ ವೆಚ್ಚವಾಗದೇ ಉಳಿಕೆಯಾಗಿರುವ ಬೆಳಗಾವಿ, ಹಾವೇರಿ ಮತ್ತು ಗದಗ ಜಿಲ್ಲಾ ಪಂಚಾಯತ್‌ಗಳಿಂದ ಅಗತ್ಯವಿರುವ ಅನುದಾನವನ್ನು ಕಾರ್ಯಕ್ರಮದ ಹಿತದೃಷ್ಟಿಯಿಂದ ಹಿಂಪಡೆದು ರೂ.44.47ಲಕ್ಷಗಳನ್ನು ಬೀದರ್ ಜಿಲ್ಲೆಗೆ ವರ್ಗಾಯಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/35/ಜೈಅಯೋ/2016 ಬೆಂಗಳೂರು, ದಿನಾಂಕ 07.05.2016**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, **2015-16**ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಕೇಂದ್ರ ಹಾಗೂ ರಾಜ್ಯ ಸಹಾಯಧನ ಬಾಕಿ ಪಾವತಿಸಲು **ರೂ.44.47ಲಕ್ಷ (ನಲವತ್ನಾಲ್ಕು ಲಕ್ಷದ ನಲವತ್ತೇಳು ಸಾವಿರ ರೂಪಾಯಿಗಳು ಮಾತ್ರ)**ಗಳನ್ನು ಕೆಳಕಂಡ ಜಿಲ್ಲಾ ಪಂಚಾಯತಿಗಳಿಂದ ಹಿಂಪಡೆದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ರವರಿಗೆ ವರ್ಗಾಯಿಸಿ ಆದೇಶಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ.ಸಂ | ಜಿಲ್ಲೆ | ಹಿಂಪಡೆದ ಸಹಾಯಧನ | | ಬೀದರ್ ಜಿಲ್ಲೆಗೆ ವರ್ಗಾಯಿಸಿದ ಮೊತ್ತ |
|---|---|---|---|---|
| | | ಕೇಂದ್ರ | ರಾಜ್ಯ | |
| 1 | ಬೆಳಗಾವಿ | 33.310 | - | 33.310 |
| 2 | ಹಾವೇರಿ | - | 6.160 | 6.160 |
| 3 | ಗದಗ | - | 5.000 | 5.000 |
| | | | ಒಟ್ಟು | **44.470** |

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ, ಹಾವೇರಿ ಮತ್ತು ಗದಗ ರವರು ಕಾರ್ಯಕ್ರಮದಡಿ ಹಿಂಪಡೆದ ಸಹಾಯಧನವನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ರವರಿಗೆ RTGS/DD ಮುಖೇನ ವರ್ಗಾಯಿಸುವುದು.

ಹಾಲಿ ವರ್ಗಾಯಿಸಲಾದ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿದ್ದು, ಕಾರ್ಯಕ್ರಮದ ಮಾರ್ಗಸೂಚಿಗಳನ್ವಯ ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡಬಾರದು ಹಾಗೂ "ಗಾಂಧಿ ಸಾಕ್ಷಿ ಕಾಯಕ" ತತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸಬೇಕು ಎಂಬ ಷರತ್ತಿಗೊಳಪಟ್ಟು ಈ ಅನುದಾನವನ್ನು ಬೆಳಗಾವಿ, ಹಾವೇರಿ ಮತ್ತು ಗದಗ ಜಿಲ್ಲಾ ಪಂಚಾಯತ್‌ಗಳಿಂದ ಬೀದರ್ ಜಿಲ್ಲಾ ಪಂಚಾಯತ್‌ಗೆ ವರ್ಗಾಯಿಸಿದೆ.

ಸದರಿ ಅನುದಾನವನ್ನು 2015-16ನೇ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಬಾಕಿ ಪಾವತಿಗಾಗಿ ವಿನಿಯೋಗಿಸುವುದು ಹಾಗೂ **ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ)**ರಡಿ ವೆಚ್ಚ ಭರಿಸತಕ್ಕದ್ದು. ಈ ಅನುದಾನ ಬಳಕೆ ಮಾಡಿಕೊಂಡಿರುವ ಫಲಾನುಭವಿಗಳ ವಿವರಗಳನ್ನು ಹಾಗೂ ನಿಗದಿತ ನಮೂನೆಗಳಲ್ಲಿ ಸಿ.ಎರವರಿಂದ ಆಡಿಟ್ ಮಾಡಿಸಿ ಹಣಬಳಕೆ ಪ್ರಮಾಣ ಪತ್ರವನ್ನು ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್, ಬೆಳಗಾವಿ, ಹಾವೇರಿ ಮತ್ತು ಗದಗ
3. ಉಪಕಾರ್ಯದರ್ಶಿ (ಅಭಿವೃದ್ಧಿ) / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್, ಬೆಳಗಾವಿ, ಹಾವೇರಿ ಮತ್ತು ಗದಗ

**ಪ್ರತಿಯನ್ನು :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
4. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.